# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸರ್ಕಾರಿ ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ ಕಾಲೇಜಿನ ಕಟ್ಟಡ ನಿರ್ಮಾಣ ಹಾಗೂ ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು, ಮೈಸೂರು ಕಾಲೇಜಿನ ಕಟ್ಟಡ ನವೀಕರಣ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಪಿಯುಇ/ ಕಟ್ಟಡ-03 / ಯೋಜನೆ-01 / ಲೆಶಿ-386/ 2017-18, ದಿನಾಂಕ:11.09.2017.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರು, ಪ್ರಾಚಾರ್ಯರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಕೋರಿಕೆಯಂತೆ, ಸದರಿ ಕಾಲೇಜು ಜಿಲ್ಲಾ ಕೇಂದ್ರದ ಕಾಲೇಜು ಆಗಿರುವುದರಿಂದ, ಹೆಚ್ಚಿನ ವಿದ್ಯಾರ್ಥಿಗಳು ದಾಖಲಾಗಿದ್ದು, ಇನ್ನೂ ಹೆಚ್ಚಿನ ದಾಖಲಾತಿ ನಿರೀಕ್ಷಿಸಬಹುದಾಗಿರುವುದರಿಂದ, ಮೊದಲನೇ ಹಂತವಾಗಿ ನೆಲಮಹಡಿ ಮತ್ತು ಮೊದಲನೆ ಮಹಡಿ ನಿರ್ಮಾಣಕ್ಕಾಗಿ ರೂ.300.00 ಲಕ್ಷ ಕಾಮಗಾರಿಗಳ ಅಂದಾಜು ಪಟ್ಟಿಯನ್ನು ಸಲ್ಲಿಸುತ್ತಾ, ಸದರಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಹಾಗೂ ಅವಶ್ಯಕ ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮುಂದುವರೆದು, ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮೈಸೂರು ಇವರು, ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು, ಮೈಸೂರು ಈ ಕಾಲೇಜಿನ ಕಟ್ಟಡ ನವೀಕರಣಕ್ಕಾಗಿ ರೂ.300.00 ಲಕ್ಷ ಕಾಮಗಾರಿಗಳ ಅಂದಾಜು ಪಟ್ಟಿಯನ್ನು ಸಲ್ಲಿಸಿದ್ದು, ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿಯೂ ಸಹ ಉತ್ತಮ ದಾಖಲಾತಿಯನ್ನು ನಿರೀಕ್ಷಿಸಬಹುದಾಗಿದೆ. ಆದ್ದರಿಂದ, ಸದರಿ ಕಾಲೇಜಿನ ರೂ.300.00 ಲಕ್ಷಗಳ ನವೀಕರಣ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ಅನುದಾನ ಬಿಡುಗಡೆ ಮಾಡುವಂತೆಯೂ ಸಹ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಇಡಿ 223 ಯೋಸಕ 2017, ಬೆಂಗಳೂರು, ದಿನಾಂಕ:14.09.2017

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಅಂಶಗಳ ಹಿನ್ನೆಲೆಯಲ್ಲಿ, ರೂ.300.00 ಲಕ್ಷಗಳ ವೆಚ್ಚದಲ್ಲಿ, ಸರ್ಕಾರಿ ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ ಕಾಲೇಜಿನ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ಹಾಗೂ ರೂ.300.00 ಲಕ್ಷಗಳ ವೆಚ್ಚದಲ್ಲಿ ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು, ಮೈಸೂರು ಕಾಲೇಜಿನ ಕಟ್ಟಡ ನವೀಕರಣ ಕಾಮಗಾರಿಯನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜು, ಚಿಕ್ಕಬಳ್ಳಾಪುರ ಕಾಲೇಜಿನ ಕಟ್ಟಡ ನಿರ್ಮಾಣ ಕಾಮಗಾರಿಗೆ ರೂ.150.00 ಲಕ್ಷಗಳ ಅನುದಾನವನ್ನು ಹಾಗೂ ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು, ಮೈಸೂರು ಕಾಲೇಜಿನ ಕಟ್ಟಡ ನವೀಕರಣ ಕಾಮಗಾರಿಗೆ ರೂ.150.00 ಲಕ್ಷಗಳ ಅನುದಾನವನ್ನು 2017–18ನೇ ಸಾಲಿನ ಆಯವ್ಯಯದ ರಾಜ್ಯ ಬಂಡವಾಳ ವೆಚ್ಚದ ಪ್ರೌಢಶಾಲೆಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಮೂಲ ಸೌಲಭ್ಯ – ಲೆಕ್ಕ ಶೀರ್ಷಿಕೆ:4202-01-202-1-05-386 (ನಿರ್ಮಾಣ) ಅಡಿಯಲ್ಲಿ ಬಿಡುಗಡೆ ಮಾಡಿದೆ.

ಸದರಿ ಅನುದಾನವನ್ನು ನಿಯಮಾನುಸಾರ ಉದ್ದೇಶಿತ ಕಾಮಗಾರಿಗಳಿಗೆ ಭರಿಸಲು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಅನುಮತಿ ನೀಡಿದೆ.

ಸದರಿ ಕಾಮಗಾರಿಯನ್ನು ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಮೂಲಕ ನಿರ್ವಹಿಸತಕ್ಕದ್ದು. ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಪ್ರಚಲಿತ ಎಲ್ಲಾ ಖರೀದಿ ನಿಯಮಗಳನ್ನು ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ಅದರಡಿಯಲ್ಲಿ ಹೊರಡಿಸಲಾದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2017, ದಿನಾಂಕ:05.04.2017ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಅಪರ್ಣಾ ಪಾವಟೆ
ಆಂತರಿಕ ಆರ್ಥಿಕ ಸಲಹೆಗಾರರು
ಹಾಗೂ ಸರ್ಕಾರದ ಉಪ ಕಾರ್ಯದರ್ಶಿ
ಶಿಕ್ಷಣ ಇಲಾಖೆ
ಹಾಗೂ ಕನ್ನಡ ಮತ್ತು ಸಂಸ್ಕೃತಿ
ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ

14/9.

(ಅಪರ್ಣಾ ಪಾವಟೆ)
ಸರ್ಕಾರದ ಉಪಕಾರ್ಯದರ್ಶಿ(ಯೋಜನೆ)
ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು,
ಶಿಕ್ಷಣ ಇಲಾಖೆ

<u>ಇವರಿಗೆ:</u>

1. ಮಹಾಲೇಖಪಾಲರು, (ಆಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
4. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
5. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, ನಂ.49, ಖನಿಜ ಭವನ, ರೇಸ್ಕೋರ್ಸ್ ರಸ್ತೆ, ಬೆಂಗಳೂರು.
7. ಸರ್ಕಾರದ ಉಪಕಾರ್ಯದರ್ಶಿ–2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
8. ಕೋ ಆರ್ಡಿನೇಟರ್, ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ, ಬೆಂಗಳೂರು.
9. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿಯನ್ನು ಮಾಹಿತಿಗಾಗಿ:</u>

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಶಿಕ್ಷಣ ಇಲಾಖೆ (ಪ್ರಾಥಮಿಕ & ಪ್ರೌಢ ಶಿಕ್ಷಣ) ಬಹುಮಹಡಿ ಕಟ್ಟಡ, ಬೆಂಗಳೂರು.
3. ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕರು, ಶಿಕ್ಷಣ ಇಲಾಖೆ, ಬೆಂಗಳೂರು.